# ಹಂದೆಗೆ ಮ್ಯಾಗ್ಸೆಸೆ



ಮನಿಲಾ: ಗ್ರಾಮೀಣ ಭಾಗದಲ್ಲಿ ಸೌರ ವಿದ್ಯುತ್ ದೀಪ ಅಳವಡಿಸುವ ಮೂಲಕ ಗ್ರಾಮಗಳನ್ನು ಬೆಳಗಿಸಿದ ಕರ್ನಾಟಕದ ಹರೀಶ್ ಹಂದೆ ಹಾಗೂ ಮಹಾರಾಷ್ಟ್ರದ ಗ್ರಾಮೀಣರ ಪಾಲಿನ ಆಶಾಕಿರಣ ನೀಲಿಮಾ ಮಿಶ್ರಾ ಪ್ರಸಕ್ತ ಸಾಲಿನ ಪ್ರತಿಷ್ಠಿತ ರಾಮನ್ ಮ್ಯಾಗ್ಸೆಸೆ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ. ತಂತ್ರಜ್ಞಾನದ ಮೂಲಕ ಕತ್ತಲ ಗ್ರಾಮಗಳಿಗೆ ಬೆಳಕು ನೀಡಿದ ಹರೀಶ್ ಹಾಗೂ ಗ್ರಾಮೀಣ ಭಾಗದಲ್ಲಿ ನೀಲಿಮಾ ನೀಡಿರುವ ಸಮಾಜ ಸೇವೆಯನ್ನು ಪರಿಗಣಿಸಿ ಇಬ್ಬರನ್ನೂ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.